ವಿ. ರಶ್ಮಿ, ಭಾ. ಆ. ಸೇ.
ಸರ್ಕಾರದ ಕಾರ್ಯದರ್ಶಿ
V. RASHMI, I.A.S.
Secretary to Government

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಅ.ಸ.ಪ.ಸಂಖ್ಯೆ: ಗ್ರಾಅಪ/214/ಗ್ರಾಪಂಅ/2013 ದಿನಾಂಕ: 03-06-2013.

ಮಾನ್ಯರೆ,

ವಿಷಯ: ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ನ್ನು ಪರಿಣಾಮಕಾರಿಯಾಗಿ ಹಾಗೂ ಕ್ರಮಬದ್ಧವಾಗಿ ಜಾರಿಗೊಳಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 11 ಗ್ರಾಪಂಅ 2013, ದಿನಾಂಕ:10-01-2013

ರಾಜ್ಯದ 5627 ಗ್ರಾಮ ಪಂಚಾಯತಿಗಳಲ್ಲಿ ದಿನಾಂಕ:02-04-2012 ರಿಂದ ಸಕಾಲ ಸೇವೆಯನ್ನು ಜಾರಿಗೊಳಿಸಲಾಗಿದ್ದು, ಸದರಿ ಸೇವೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಸಂಬಂಧಿಸಿದಂತೆ 11 ಸೇವೆಗಳನ್ನು ಒದಗಿಸುವಂತೆ ಮತ್ತು ಸದರಿ ಸೇವೆಗಳನ್ನು ಪರಿಣಾಮಕಾರಿಯಾಗಿ ಹಾಗೂ ಕ್ರಮಬದ್ಧವಾಗಿ ಜಾರಿಗೊಳಿಸುವ ಬಗ್ಗೆ ಸರ್ಕಾರದ ಹಲವಾರು ಸುತ್ತೋಲೆಗಳ ಮೂಲಕ ನಿರ್ದೇಶನ ನೀಡಲಾಗಿರುತ್ತದೆ.

ಸಕಾಲದಡಿ ಗ್ರಾ.ಅ.ಪಂ.ರಾಜ್ ಇಲಾಖೆಯಲ್ಲಿ ಗುರುತಿಸಿರುವ ಸೇವೆಗಳನ್ನು ಗ್ರಾಮ ಪಂಚಾಯತಿಗಳು ನಿಗದಿತ ಕಾಲಮಿತಿಯಲ್ಲಿ ಒದಗಿಸುತ್ತಿರುವ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಇವರು ಉಸ್ತುವಾರಿ ನಡೆಸಲು ತಿಳಿಸಲಾಗಿದೆ. ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುತ್ತಿರುವ ಬಗ್ಗೆ ಉಪಕಾರ್ಯದರ್ಶಿ (ಗ್ರಾಮ ಪಂಚಾಯತಿ ಆಡಳಿತ ವಿಷಯಗಳನ್ನು ನಿರ್ವಹಿಸುವವರು) ಇವರು ಉಸ್ತುವಾರಿ ನಡೆಸಲು ತಿಳಿಸಲಾಗಿದೆ. ಗ್ರಾ.ಅ.ಪಂ.ರಾಜ್ ಇಲಾಖೆಗೆ ಸಂಬಂಧಿಸಿದಂತೆ ಸಕಾಲ ಸೇವೆ ಬಗ್ಗೆ ಸಮಗ್ರ ಮೇಲುಸ್ತುವಾರಿ ನಡೆಸುವುದು. ಮತ್ತು ಯಶಸ್ವಿ ಅನುಷ್ಠಾನಕ್ಕೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಇವರನ್ನು ಸಂಪೂರ್ಣ ಜವಾಬ್ದಾರರನ್ನಾಗಿ ಮಾಡಲಾಗಿದೆ.

ಜಿಲ್ಲಾ ಮಟ್ಟ, ತಾಲ್ಲೂಕು ಮಟ್ಟ ಹಾಗೂ ಗ್ರಾಮ ಮಟ್ಟದ ಕಛೇರಿಗಳಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ನ್ನು ಪರಿಣಾಮಕಾರಿಯಾಗಿ ಹಾಗೂ ಕ್ರಮಬದ್ಧವಾಗಿ ಜಾರಿಗೊಳಿಸದೆ ಇರುವುದನ್ನು ಗಮನಿಸಲಾಗಿದೆ. ಸಕಾಲ ಸೇವೆಗಳಲ್ಲಿ ಬರುವ ಎಲ್ಲಾ ಅರ್ಜಿಗಳನ್ನು ನೋಂದಣಿ ಮಾಡಿ ಸಕಾಲ ಸಂಖ್ಯೆ ನೀಡದಿರುವುದು, ಅರ್ಜಿಗಳನ್ನು ನೀಡಿರುವ ಕಾಲವಕಾಶದೊಳಗೆ ವಿಲೇವಾರಿ ಮಾಡದಿರುವುದು. ಮತ್ತು ಕೆಲವು ಜಿಲ್ಲಾ ಪಂಚಾಯತಿಗಳ ಗ್ರಾಮ ಪಂಚಾಯತಿಗಳು ಸಕಾಲ ಸೇವೆಯಡಿ ಅರ್ಜಿಗಳನ್ನು ಸ್ವೀಕರಿಸದಿರುವುದು. ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಸಕಾಲ ಸೇವೆ ಬಗ್ಗೆ ನಾಮಫಲಕಗಳನ್ನು ಅಳವಡಿಸದೆ ಇರುವುದು, ತಾಂತ್ರಿಕ ಸಮಸ್ಯೆಗಳಿಂದ ಸೇವೆಗಳನ್ನು ನೀಡದೆ ಇರುವುದು, ಅಧಿಕಾರಿಗಳು ತಮ್ಮ ಅಧೀನ ಸಿಬ್ಬಂದಿಗಳ ಕಾರ್ಯಚಟುವಟಿಕೆಗಳ ಬಗ್ಗೆ ಸೂಕ್ತ ಮೇಲ್ವಿಚಾರಣೆ ಮಾಡದೆ ಇರುವುದು ಕಂಡು ಬಂದಿರುವುದಾಗಿ ತಿಳಿಸಲಾಗಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದಲ್ಲಿ ತಾಲ್ಲೂಕು ಮಟ್ಟದ ಹಾಗೂ ಗ್ರಾಮ ಮಟ್ಟದ ಕಛೇರಿಗಳಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ನ್ನು ಪರಿಣಾಮಕಾರಿಯಾಗಿ ಹಾಗೂ ಕ್ರಮಬದ್ಧವಾಗಿ ಜಾರಿಗೊಳಿಸಲು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದೆ.

1. ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ರ ಕಲಂ 5(1) ರಂತೆ ಸಲ್ಲಿಕೆಯಾಗುವ ಪ್ರತಿಯೊಂದು ಅರ್ಜಿಗೂ 15 ಅಂಕಿಗಳ ಸ್ವೀಕೃತಿ ಪತ್ರವನ್ನು ಕಡ್ಡಾಯವಾಗಿ ಅರ್ಜಿದಾರರಿಗೆ ನೀಡುವುದು.
2. ನಿಗದಿಪಡಿಸಿರುವ ಅವಧಿಯೊಳಗೆ ಗ್ರಾಮ ಪಂಚಾಯತಿಯು ಸಕಾಲ ಅಧಿನಿಯಮದಡಿ ಸೇವೆಗಳನ್ನು ಒದಗಿಸುವುದು.

3ನೇ ಮಹಡಿ, 3ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001. 3rd Floor, 3rd Stage, M.S. Building, Bangalore-560 001.
Tel. : 2238 4574 2203 2941 Fax : 080-2238 9520 E-mail : secypr-rdpr@karnataka.gov.in / rashmi.venkataraju@gmail.com

3. ಸಕಾಲ ಸೇವೆಯಡಿ ಗ್ರಾಮ ಪಂಚಾಯತಿಯು ಅರ್ಜಿದಾರರಿಂದ ಅರ್ಜಿಯನ್ನು ಸ್ವೀಕರಿಸುವುದು. ಯಾವುದೇ ಕಾರಣಕ್ಕೂ ದಲ್ಲಾಳಿಗಳಿಂದ ಹತ್ತಾರು ಅರ್ಜಿಗಳನ್ನು ಒಟ್ಟಾಗಿ ಪಡೆಯತಕ್ಕದ್ದಲ್ಲ.
4. ಎಲ್ಲಾ ಗ್ರಾಮ ಪಂಚಾಯತಿಗಳು ಸಕಾಲ ಸೇವೆಯಡಿ ಸೇವೆ ಒದಗಿಸುವುದು.
5. ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಡ್ಡಾಯವಾಗಿ ಸಕಾಲ ಯಶಸ್ವಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಪ್ರತಿ ತಿಂಗಳು ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ (ಅಭಿವೃದ್ಧಿ), ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ನಡೆಸಿ ಸಭೆಯ ನಡವಳಿಯನ್ನು ಸಕಾಲ ಮಂಡಳಿಗೆ ಕಳುಹಿಸುವುದು.
6. ಕರ್ನಾಟಕ ಪಂ.ರಾಜ್ ಅಧಿನಿಯಮ 1993 ರ ಪ್ರಕರಣ 232 ರಂತೆ ತಾಲ್ಲೂಕು ಪಂಚಾಯತಿಯ ಸಂಬಂಧದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು ಮತ್ತು ಗ್ರಾಮ ಪಂಚಾಯತಿ ಸಂಬಂಧದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಯು ಪರಿವೀಕ್ಷಣೆ ಮತ್ತು ಮೇಲ್ವಿಚಾರಣೆ ಮಾಡುವುದು.

**ವಂದನೆಗಳೊಂದಿಗೆ,**

ತಮ್ಮ ವಿಶ್ವಾಸಿ,

Krishnill.

ಎಲ್ಲಾ ಜಿಲ್ಲಾ ಪಂಚಾಯತಿ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು